# ಮಹಿಳಾ ಆರೋಗ್ಯ ಮತ್ತು ನೈರ್ಮಲ್ಯ–ಮಾರ್ಗದರ್ಶನ




**ಶುಭೋದಯ ವಾರ್ತೆ: (ಸೆ.24) ಹಳಿಯಾಳ:** ಕೆ ಎಲ್ ಎಸ್ ವಿ ಡಿ ಐ ಟಿ ಹಳಿಯಾಳದಲ್ಲಿ ಮಹಿಳಾ ಆರೋಗ್ಯ ಹಾಗೂ ನೈರ್ಮಲ್ಯ ಕುರಿತಾಗಿ ಉಪನ್ಯಾಸ ಕಾರ್ಯಕ್ರಮವನ್ನು ಸಪ್ಟೆಂಬರ್ 23ರಂದು ಆಯೋಜಿಸಲಾಗಿತ್ತು. ಈ ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಯಾಗಿ ಬೆಂಗಳೂರಿನ ಏಕೋ ಕ್ಲಬ್ ಫೌಂಡೇಶನ್ ನ ಸಂಸ್ಥಾಪಕಿ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವೈಶಾಖಾ ಕುಲಕರ್ಣಿ ಆಗಮಿಸಿದ್ದರು. ಇಂದು ಮಹಿಳೆಯರು ಎಲ್ಲಾ ಕ್ಷೇತ್ರದಲ್ಲಿಯೂ ಪುರುಷರಿಗೆ ಸಮಾನವಾಗಿ ಬೆಳೆಯುತ್ತಿದ್ದು, ಮಹಿಳಾ ಸಬಲೀಕರಣಕ್ಕೆ ಹಿಡಿದ ಕೈಗನ್ನಡಿಯಾಗಿದೆ ಎಂದು ಹೇಳಿದರು. ಕುಟುಂಬ ಹಾಗೂ ಕಾರ್ಯಕ್ಷೇತ್ರದಲ್ಲಿನ ಒತ್ತಡವನ್ನು ಸಮರ್ಪಕವಾಗಿ ನಿರ್ವಹಿಸಲು ಸಲಹೆ ನೀಡಿದರು. ವಿದ್ಯಾರ್ಥಿನಿಯರು ಅಗತ್ಯಕ್ಕಿಂತ ಹೆಚ್ಚಾಗಿ ಸಾಮಾಜಿಕ ಜಾಲತಾಣಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳಬಾರದೆಂದು ಕಿವಿಮಾತು ಹೇಳುತ್ತ ಸ್ವಾಸ್ಥ್ಯದ ಕುರಿತಾಗಿ ವಿವರಿಸಿದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ಮಹಾವಿದ್ಯಾಲಯದಲ್ಲಿ ವಿದ್ಯಾರ್ಥಿನಿಯರಿಗೆ ಒದಗಿಸಿರುವ ವಿಶೇಷ ಸೌಲಭ್ಯಗಳ ಕುರಿತಾಗಿ ತಿಳಿಸಿದರು. ಮಹಾವಿದ್ಯಾಲಯದ ಪ್ರಗತಿಯಲ್ಲಿ ಮಹಿಳಾ ಉದ್ಯೋಗಿಗಳ ಪಾತ್ರವನ್ನು ಪ್ರಶಂಸಿಸಿದರು. ಮಹಿಳಾ ಘಟಕದ ಮುಖ್ಯಸ್ಥೆ ಡಾ. ಮೀನಲ್ ಕಲಿವಾಲ್ ಸ್ವಾಗತಿಸಿದರು. ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ ವಿಭಾಗದ ಪ್ರೊ. ರಾಜೇಶ್ವರಿ ಎನ್ ವಂದಿಸಿದರು. ಮಹಿಳಾ ಘಟಕದ ವತಿಯಿಂದ ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ ನೂರಕ್ಕೂ ಅಧಿಕ ಪ್ರಥಮ ವರ್ಷದ ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

Wo

# ಮಹಿಳಾ ಆರೋಗ್ಯ ಮತ್ತು ನೈರ್ಮಲ್ಯ ಮಾರ್ಗದರ್ಶನ



ಹಳಿಯಾಳ: ಕೆ ಎಲ್ ಎಸ್ ವಿ ಡಿ ಐ ಟಿ ಹಳಿಯಾಳದಲ್ಲಿ ಮಹಿಳಾ ಆರೋಗ್ಯ ಹಾಗೂ ನೈರ್ಮಲ್ಯ ಕುರಿತಾಗಿ ಉಪನ್ಯಾಸ ಕಾರ್ಯಕ್ರಮವನ್ನು ಸಪ್ಟೆಂಬರ್ 23ರಂದು ಆಯೋಜಿಸಲಾಗಿತ್ತು. ಈ ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಯಾಗಿ ಬೆಂಗಳೂರಿನ ಏಕೋ ಕ್ಲಬ್ ಫೌಂಡೇಶನ್ ನ ಸಂಸ್ಥಾಪಕಿ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವೈಶಾಖಾ ಕುಲಕರ್ಣಿ ಆಗಮಿಸಿದ್ದರು.

ಇಂದು ಮಹಿಳೆಯರು ಎಲ್ಲಾ ಕ್ಷೇತ್ರದಲ್ಲಿಯೂ ಪುರುಷರಿಗೆ ಸಮಾನವಾಗಿ ಬೆಳೆಯುತ್ತಿದ್ದು, ಮಹಿಳಾ ಸಬಲೀಕರಣಕ್ಕೆ ಹಿಡಿದ ಕೈಗನ್ನಡಿಯಾಗಿದೆ ಎಂದು ಹೇಳಿದರು. ಕುಟುಂಬ ಹಾಗೂ ಕಾರ್ಯಕ್ಷೇತ್ರದಲ್ಲಿನ ಒತ್ತಡವನ್ನು ಸಮರ್ಪಕವಾಗಿ ನಿರ್ವಹಿಸಲು ಸಲಹೆ ನೀಡಿದರು. ವಿದ್ಯಾರ್ಥಿನಿಯರು ಅಗತ್ಯಕ್ಕಿಂತ ಹೆಚ್ಚಾಗಿ ಸಾಮಾಜಿಕ ಜಾಲತಾಣಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳಬಾರದೆಂದು ಕಿವಿಮಾತು ಹೇಳುತ್ತ ಸ್ವಾಸ್ಥ್ಯದ ಕುರಿತಾಗಿ ವಿವರಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ಮಹಾವಿದ್ಯಾಲಯದಲ್ಲಿ ವಿದ್ಯಾರ್ಥಿನಿಯರಿಗೆ ಒದಗಿಸಿರುವ ವಿಶೇಷ ಸೌಲಭ್ಯಗಳ ಕುರಿತಾಗಿ ತಿಳಿಸಿದರು. ಮಹಾವಿದ್ಯಾಲಯದ ಪ್ರಗತಿಯಲ್ಲಿ ಮಹಿಳಾ ಉದ್ಯೋಗಿಗಳ ಪಾತ್ರವನ್ನು ಪ್ರಶಂಸಿಸಿದರು. ಮಹಿಳಾ ಘಟಕದ ಮುಖ್ಯಸ್ಥೆ ಡಾ. ಮೀನಲ್ ಕಲಿವಾಲ್ ಸ್ವಾಗತಿಸಿದರು. ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ ವಿಭಾಗದ ಪ್ರೊ. ರಾಜೇಶ್ವರಿ ಎನ್ ವಂದಿಸಿದರು. ಮಹಿಳಾ ಘಟಕದ ವತಿಯಿಂದ ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ ನೂರಕ್ಕೂ ಅಧಿಕ ಪ್ರಥಮ ವರ್ಷದ ವಿದ್ಯಾರ್ಥಿನಿಯರು ಭಾಗವಹಿಸಿದ್ದರು.


Powered By KHUSHIHOST ® | License - ePaperCloud.com